ಅನುದಾನ ಒದಗಿಸುವ ಸಹಮತಿ ದೊರೆತಿರುವುದರಿಂದ ಕ್ರಿಯಾಯೋಜನೆಯನ್ನು ತಯಾರಿಸಿ ಅನುಮೋದನೆ ಪಡೆಯಲಾಗಿದ್ದು ಸಧ್ಯದಲ್ಲಿಯೇ ಹೊಸ ಕಾಮಗಾರಿಗಳ ಅಪೆಂಡಿಕ್ಸ್–ಇಯನ್ನು ಹೊರಡಿಸ ಲಾಗುವುದು.

ಈ) ಈಗಾಗಲೇ 2011–12ನೇ ಸಾಲಿನ ಹೊಸ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು (ಅಪೆಂಡಿಕ್ಸ್–ಇ) ತಯಾರಿಸಲಾಗಿದ್ದು ಸಧ್ಯದಲ್ಲಿಯೇ ಹೊರಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಟ್ರಾಕ್ಟರ್ ಖರೀದಿಸುವ ರೈತರಿಗೆ ಸಬ್ಸಿಡಿ

1017 (647) ಶ್ರೀ ರುದ್ರೇಶ್‌ಗೌಡ ವೈ.ಎನ್. (ಬೇಲೂರು) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರದ ಕೃಷಿ ಇಲಾಖೆ ವತಿಯಿಂದ ಹೊಸದಾಗಿ ಟ್ರ್ಯಾಕ್ಟರ್ ಖರೀದಿಸಿದ ರೈತರಿಗೆ ಸಬ್ಸಿಡಿ ನೀಡುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳು ಈ ಹಿಂದೆ ಸದನದಲ್ಲಿ ಆಶ್ವಾಸನೆಯನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಯೋಜನೆಯಲ್ಲಿ ಎಷ್ಟು ರೈತರಿಗೆ ಟ್ರ್ಯಾಕ್ಟರ್ ಸಬ್ಸಿಡಿ ನೀಡಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು);

ಇ) ಆಶ್ವಾಸನೆಯಂತೆ ಸಬ್ಸಿಡಿ ನೀಡದಿದ್ದರೆ ರೈತರಿಗೆ ಮಾಡಿದ ಅನ್ಯಾಯವಲ್ಲವೇ;

ಈ) ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಉಮೇಶ್. ಕತ್ತಿ (ಕೃಷಿ ಸಚಿವರು) :

ಅ) ಹೌದು.

ಆ) ಟ್ರ್ಯಾಕ್ಟರ್‌ಗಳಿಗೆ ಸಹಾಯಧನವನ್ನು ನೀಡಿದಲ್ಲಿ, ಆಯವ್ಯಯದ ಹೆಚ್ಚಿನ ಅನುದಾನವನ್ನು ಈ ಒಂದೇ ಘಟಕಕ್ಕೆ ವಿನಿಯೋಗಿಸಬೇಕಾಗುತ್ತದೆಯೇ ಹೊರತು ಇತರೇ ಕೃಷಿ ಉಪಕರಣಗಳನ್ನು ಸಹಾಯಧನದಲ್ಲಿ ವಿತರಿಸಲು ಸಾಧ್ಯವಾಗುವುದಿಲ್ಲ ಎಂಬ ಕಾರಣಕ್ಕಾಗಿ ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡುವುದನ್ನು 2010–11ನೇ ಸಾಲಿನಲ್ಲಿ ಸ್ಥಗಿತಗೊಳಿಸಲಾಗಿರುತ್ತದೆ. 2011–12ನೇ ಸಾಲಿನಲ್ಲಿಯೂ ಸಹ ಟ್ರ್ಯಾಕ್ಟರ್‌ಗೆ ಸಹಾಯಧನ ನೀಡುವುದನ್ನು ಸ್ಥಗಿತಗೊಳಿಸಿರುವುದನ್ನು ಮುಂದುವರೆಸಲಾಗಿರುತ್ತದೆ.

ಇ) ಟ್ರ್ಯಾಕ್ಟರ್‌ಗೆ ಮಾತ್ರ ಸಹಾಯಧನ ನೀಡುವುದನ್ನು ಸ್ಥಗಿತಗೊಳಿಸಿ ಇತರೆ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ವಿತರಿಸಲು ಅವಕಾಶ ಕಲ್ಪಿಸಲಾಗಿದೆ.

ಈ) ಆಯವ್ಯಯದ ಹೆಚ್ಚಿನ ಅನುದಾನವನ್ನು ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡುವಲ್ಲಿ ವಿನಿಯೋಗಿಸುವುದನ್ನು ತಪ್ಪಿಸಿ, ಉತ್ಪಾದನೆ ಹೆಚ್ಚಿಸುವಂತಹ ಹಾಗೂ ರೈತರಿಗೆ ಉಪಯೋಗವಾಗುವಂತಹ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

SFC ಯೋಜನೆಯಲ್ಲಿ ಅನುದಾನ

1018 (648) ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯ ಬೇಲೂರು ಪುರಸಭೆಗೆ ಎಸ್.ಎಫ್.ಸಿ. ಯೋಜನೆಯಲ್ಲಿ 2010–11ನೇ ಸಾಲಿನಲ್ಲಿ ನಿಗದಿಪಡಿಸಿದ ಅನುದಾನ ಎಷ್ಟು;

ಆ) ಇತರೆ ಪುರಸಭೆಗೆ ಹೋಲಿಸಿದ್ದಲ್ಲಿ ಪ್ರವಾಸೋದ್ಯಮ ಕೇಂದ್ರವಾದ ಬೇಲೂರಿಗೆ ನಿಗದಿಪಡಿಸಿದ ಅನುದಾನ ಕಡಿಮೆಯಾಗಿರುವುದಿಲ್ಲವೆ;

ಇ) ಅನುದಾನ ಬಿಡುಗಡೆ ಮಾಡಲು ಇರುವ ಮಾನದಂಡವೇನು?

ಶ್ರೀ ಬಾಲಚಂದ್ರ ಲ. ಜಾರಕಿಹೋಳಿ (ಪೌರಾಡಳಿತ, ಸ್ಥಳೀಯ, ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು) :

ಅ) ರೂ.164.90 ಲಕ್ಷಗಳು.

ಆ) ಸರ್ಕಾರದ ಆದೇಶ ಸಂಖ್ಯೆ:ನಅಇ/121/ಎಸ್‌ಎಫ್‌ಸಿ/05, ದಿನಾಂಕ: 12–04–2006ರಲ್ಲಿನ ಹಂಚಿಕಾಸೂತ್ರದನ್ವಯ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ.

ಇ) ಈ ಕೆಳಕಂಡ ಹಂಚಿಕಾಸೂತ್ರದನ್ವಯ ನಿಗಧಿಪಡಿಸಿ, ಅನುದಾನ ಬಿಡುಗಡೆ ಮಾಡಲಾಗುತ್ತಿದೆ.